## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

### ಸಿಸಿ ನಂ**. 179/2019**

ಚಾಸಾ- 1 ಪ್ರಾಸಾ-2

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 08-12-2025

| | | |
|---|---|---|
| ಹೆಸರು | : | ನಿಂಬಣ್ಣ |
| ತಂದೆಯ ಹೆಸರು | : | ಸಿದ್ದಪ್ಪ |
| ವಯಸ್ಸು | : | 65 ವರ್ಷ |
| ಉದ್ಯೋಗ | : | ನಿವೃತ್ತ ಅಬಕಾರಿ ಉಪ ಅಧೀಕ್ಷಕರು |
| ವಾಸಸ್ಥಳ | : | ಕಲಬುರಗಿ |

-: ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-

ದಿನಾಂಕಃ 15-07-2014 ರಿಂದ ಜುಲೈ 2019 ರವರೆಗೆ ನಾನು ಕಲಬುರಗಿ ಅಬಕಾರಿ ಉಪ ಆಯುಕ್ತರ ಕಚೇರಿಯಲ್ಲಿ ಉಪ ಅಧೀಕ್ಷಕರಾಗಿ ಕಾರ್ಯನಿರ್ವಹಿಸಿರುತ್ತೇನೆ.

ದಿಃ 02-04-2018 ರಂದು ಬೆಳಿಗ್ಗೆ 8 ಗಂಟೆಗೆ ನಾನು ಕಚೇರಿ ಕರ್ತವ್ಯದಲ್ಲಿದ್ದಾಗ ಖಚಿತ ಭಾತ್ಮಿ ಬಂದಿರುತ್ತದೆ. ಸದರಿ ಭಾತ್ಮಿ ಏನೆಂದರೆ ಅಫಜಲಪುರದಿಂದ ಘತ್ತರಗಾ ಹೋಗುವ ರಸ್ತೆಯ ಮಾರ್ಗದ ದಿಲಖುಷ ಧಾಬಾದಲ್ಲಿ ಅಕ್ರಮವಾಗಿ ಮಧ್ಯ ಮಾರಾಟ ಮಾಡುತ್ತಿದ್ದಾರೆ ಎಂಬುದಾಗಿರುತ್ತದೆ. ನಂತರ ಇಬ್ಬರು ವ್ಯಕ್ತಿಗಳನ್ನು ಕರೆಯಿಸಿ ಅವರಿಗೆ ಭಾತ್ಮಿ ಬಗ್ಗೆ ತಿಳಿಸಿ ಪಂಚರಾಗಲು ಕೋರಿದ್ದು ಸದರಿಯವರು ಒಪ್ಪಿಕೊಂಡಿದರಿಂದ ನಾನು ಪಂಚರು ಸಿಬ್ಬಂದಿ ಕೂಡಿಕೊಂಡು ನಮ್ಮ ಇಲಾಖಾ ಜೀಪಿನಲ್ಲಿ ಭಾತ್ಮಿ ಬಂದ ಸ್ಥಳಕ್ಕೆ ಹೋಗಿರುತ್ತೇವೆ. ಆರೋಪಿ ನಮಗೆ ನೋಡಿ ಓಡಿಹೋಗಿರುತ್ತಾನೆ. ದಾಬಾದಲ್ಲಿ ಪರಿಶೀಲನೆ ಮಾಡುತ್ತಿರುವಾಗ ಒಂದು ರಟ್ಟಿನ ಪೆಟ್ಟಿಗೆಯಲ್ಲಿ 650 ML ನ 72 Kingfisher ಬಿಯರ ಬಾಟಲಿ ಮತ್ತು 650 ML ನ 16 ನಾಕೌಟ ಬಿಯರ ಬಾಟಲಿ ದೊರೆತಿರುತ್ತವೆ. ಅವುಗಳನ್ನು ಜಪ್ತಿಪಡಿಸಿಕೊಂಡು

ಸದರಿಯವುಗಳಿಂದ ಪ್ರತ್ಯೇಕವಾಗಿ 2 ರಂತೆ ಒಟ್ಟು 4 ಬಾಟಲಿಗಳನ್ನು ರಾಸಾಯನಿಕ ಪರೀಕ್ಷೆಗಾಗಿ ಮಾದರಿ ಅಂತ ತೆಗೆಯಲಾಯಿತು.

ಸದರಿಯವುಗಳಿಗೆ ಬಿಳಿ ಬಟ್ಟೆಯಿಂದ ಸುತ್ತಿ ದಾರದಿಂದ ಕಟ್ಟಿ ಸೀಲು ಮಾಡಿ ಪಂಚರ ಸಮಕ್ಷಮ ಸ್ಥಳದಲ್ಲಿ ಪಂಚನಾಮೆ ಮಾಡಲಾಯಿತು. ಅಬಕಾರಿ ಕಾಯಿದೆ ಅಡಿಯಲಿ ಪ್ರಕರಣ ದಾಖಲಿಸಿ ಪ್ರ.ವ.ವ. ಮಾನ್ಯ ನ್ಯಾಯಾಲಯಕ್ಕೆ ಕಳುಹಿಸಲಾಯಿತು.

ಸಾಕ್ಷಿಗೆ ಜಪ್ತಿ ಪಂಚನಾಮೆಯ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು, ಜಪ್ತಿ ಪಂಚನಾಮೆಯನ್ನು ನಿಪಿ-**3** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**3**(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ದೂರಿನ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು, ದೂರನ್ನು ನಿಪಿ-**4** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**4**(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಪ್ರ.ವ.ವ. ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ಈಗ ನಿಪಿ-**5** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**5**(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ತೆರೆದ ನ್ಯಾಯಾಲಯದಲ್ಲಿ 650 ML ನ 2 Kingfisher ಬಿಯರ ಬಾಟಲಿ ಮತ್ತು 650 ML ನ 2 ನಾಕೌಟ ಬಿಯರ ಬಾಟಲಿತೋರಿಸಿದ್ದು ಸಾಕ್ಷಿ ಅವುಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ಕ್ರಮವಾಗಿ ಮುಮಾ. 1 ರಿಂದ 4 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>**

ನಾನು ದಾಳಿ ಮಾಡುವ ಪೂರ್ವದಲ್ಲಿ ಮಾನ್ಯ ನ್ಯಾಯಾಲಯದ ಆದೇಶ ಪಡೆಯಲು ಸಮಯ ಅವಕಾಶ ಇಲ್ಲದ ಕಾರಣ ಸ್ಥಳದಲ್ಲಿ ಶೋಧನಾ ಸಮುಚ್ಚಿತ ತಯಾರಿಸಿ ಗುನ್ಹೆಸ್ಥಳ ಪರಿಶೀಲನೆ ಮಾಡಿರುತ್ತೇನೆ ಎಂದರೆ ಸರಿ.

ಸಾಕ್ಷಿಗೆ ಶೋದನಾ ಸಮುಚ್ಚಿತ ಪತ್ರವನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ಈಗ ನಿಪಿ-**6** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**6**(ಎ) ಎಂದು ಗುರುತಿಸಲಾಯಿತು.

ದೊರೆತ ಮುದ್ದೆಮಾಲುಗಳನ್ನು ರಾಸಾಯನಿಕ ಪ್ರಯೋಗಾಲಯಕ್ಕೆ ಮನವಿ ಪತ್ರದೊಂದಿಗೆ ಚಾಸಾ 4 ರವರನ್ನು ನೇಮಿಸಿ ಕಳುಹಿಸಿಕೊಟ್ಟಿರುತ್ತೇನೆ ಎಂದರೆ ಸರಿ.

ಸಾಕ್ಷಿಗೆ ರಾಸಾಯನಿಕ ಪರೀಕ್ಷೆಗೆ ಕಳುಹಿಸಿದ ಮನವಿ ಪತ್ರವನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-**1** ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ **1**(ಎ) ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ **RMS** ವಕೀಲರಿಂದಃ-</u>

ದಿಃ 02-04-2018 ರಂದು ಬೆಳಿಗ್ಗೆ 8 ಗಂಟೆಗೆ ನಾನು ಕಚೇರಿ ಕರ್ತವ್ಯದಲ್ಲಿದ್ದಾಗ ಖಚಿತ ಭಾತ್ಮಿ ಬಂದಿರುತ್ತದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಭಾತ್ಮಿಯೂ ಅಫಜಲಪುರದಿಂದ ಘತ್ತರಗಾ ಹೋಗುವ ರಸ್ತೆಯ ಮಾರ್ಗದ ದಿಲಖುಷ ಧಾಬಾದಲ್ಲಿ ಅಕ್ರಮವಾಗಿ ಮಧ್ಯ ಮಾರಾಟ ಮಾಡುತ್ತಿದ್ದಾರೆ ಎಂಬುದಾಗಿರುತ್ತದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಂತರ ಇಬ್ಬರು ವ್ಯಕ್ತಿಗಳನ್ನು ಕರೆಯಿಸಿ ಅವರಿಗೆ ಭಾತ್ಮಿ ಬಗ್ಗೆ ತಿಳಿಸಿ ಪಂಚರಾಗಲು ಕೋರಿದ್ದು ಸದರಿಯವರು ಒಪ್ಪಿಕೊಂಡಿದರಿಂದ ನಾನು ಪಂಚರು ಸಿಬ್ಬಂದಿ ಕೂಡಿಕೊಂಡು ನಮ್ಮ ಇಲಾಖಾ ಜೀಪಿನಲ್ಲಿ ಭಾತ್ಮಿ ಬಂದ ಸ್ಥಳಕ್ಕೆ ಹೋಗಿರುತ್ತೇವೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿ ನಮಗೆ ನೋಡಿ ಓಡಿಹೋಗಿರುತ್ತಾನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಂಚರ ಹೆಸರು ಹೇಳುತ್ತೇನೆ. ನಾನು ಹೋಗುವಷ್ಟರಲ್ಲಿ ಪರಾರಿಯಾಗಿದ್ದನು. ದಾಬಾದಲ್ಲಿ ಕೋಣೆಗಳು ಇರಲಿಲ್ಲ. ದಾಬಾದಲ್ಲಿ ಯಾವ ದಿಕ್ಕಿನಲ್ಲಿ ಮುದ್ದೆಮಾಲು ಇಟ್ಟಿದ್ದರು ಎಂದು ನಾನು ನೋಡಿಲ್ಲ. ಮು.ಮಾ. 1 ರಿಂದ 4 ರೀತಿಯ ಬಾಟಲಿಗಳು ಬೇರೆ ಮಧ್ಯ ಅಂಗಡಿಯಲ್ಲಿ ದೊರೆಯುತ್ತವೆ ಎಂದರೆ ಸರಿ. ಮು.ಮಾ. 1 ರಿಂದ 4 ರ ಬ್ಯಾಚ ನಂಬರ ನನಗೆ ಗೊತ್ತಿಲ್ಲ. ಆರೋಪಿತನ ವಿರುದ್ದ ಸುಳ್ಳು ದೂರು ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ ದಂಡಾಧಿಕಾರಿಗಳು
ಅಫಜಲಪೂರ